ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1092

ಸದಸ್ಯರ ಹೆಸರು : ಶ್ರೀ.ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ

ಉತ್ತರಿಸುವ ಸಚಿವರು : ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸುವ ದಿನಾಂಕ : 29.09.2020

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಕೋವಿಡ್-19 ಕಾರಣಕ್ಕಾಗಿ ದೇಶದಲ್ಲಿ ವಿಧಿಸಿದ ಲಾಕ್ ಡೌನ್ ಸಂದರ್ಭದಲ್ಲಿ ಹೂವಿನ ಬೆಳೆಗಾರರಿಗೆ ಉಂಟಾದ ನಷ್ಟಕ್ಕೆ ಪರಿಹಾರ ನೀಡಲು ಸರ್ಕಾರ ಭರವಸೆ ನೀಡಿದ್ದು, ಈವರೆಗೆ ರಾಜ್ಯದಲ್ಲಿ ಪರಿಹಾರ ಪಡೆದ ಹೂ ಬೆಳೆಗಾರರ ಸಂಖ್ಯೆ ಎಷ್ಟು;	ಈವರೆಗೆ ರಾಜ್ಯದಲ್ಲಿ ಒಟ್ಟು 20,292 ಹೂವಿನ ಬೆಳೆಗಾರರಿಗೆ ಪರಿಹಾರ ವಿತರಿಸಲಾಗಿರುತ್ತದೆ.
ಆ	ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹೂ ಬೆಳೆಗಾರರು ಹೆಸರು ನೋಂದಣಿ ಮಾಡಿಕೊಂಡಿದ್ದಾರೆ;	ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 285 ಹೂ ಬೆಳೆಗಾರರು ಹೆಸರು ನೋಂದಣಿ ಮಾಡಿಕೊಂಡಿರುತ್ತಾರೆ.
ಇ	ಅದರಲ್ಲಿ ಎಷ್ಟು ಜನರಿಗೆ ಪರಿಹಾರದ ಮೊತ್ತ ದೊರಕಿದೆ;	ಬೆಳಗಾವಿ ಜಿಲ್ಲೆಯಲ್ಲಿ ಈವರೆಗೂ ಒಟ್ಟು 263 ಹೂವಿನ ಬೆಳೆಗಾರರಿಗೆ ರೂ. 13.89 ಲಕ್ಷಗಳ ಪರಿಹಾರ ವಿತರಿಸಲಾಗಿರುತ್ತದೆ.
ಈ	ಬೆಳಗಾವಿ ಜಿಲ್ಲೆಯ ಹೂ ಬೆಳೆಗಾರರಿಗೆ ಪರಿಹಾರದ ಮೊತ್ತ ಇನ್ನೂ ತಲುಪಿಲ್ಲವೆಂಬ ಕೂಗು ಕೇಳಿಬರುತ್ತಿದ್ದು, ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	2019-20 ನೇ ಸಾಲಿನ ಬೆಳೆ ಸಮೀಕ್ಷೆಯ ದತ್ತಾಂಶದಲ್ಲಿ ದಾಖಲಾದ ಹೂವಿನ ಬೆಳೆಗಾರರಿಗೆ ಸದರಿ ಯೋಜನೆಯ ಮಾರ್ಗಸೂಚಿಯನ್ವಯ ಪರಿಹಾರಧನವನ್ನು ವಿತರಿಸಲಾಗುತ್ತಿದೆ. ಬೆಳೆ ಸಮೀಕ್ಷೆಯಲ್ಲಿ ನೋಂದಾಯಿಸಿ ಕೊಳ್ಳದ ರೈತರಿಂದ ಅರ್ಜಿ ಪಡೆದು ಪರಿಶೀಲಿಸಿ, ಜಿಲ್ಲಾವಾರು ವಿವರಗಳನ್ನು ಪರಿಶೀಲಿಸಲಾಗುತ್ತಿದೆ.

HORTI 402 HGM 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ
ಸಚಿವರು